# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯವ/ಕೊಉ/ಪಿಆರ್/03/2020-21

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092

ದಿನಾಂಕ: 06-02-2021

**ದಿನಾಂಕ: 06-02-2021 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀ ಶ್ರೀನಿವಾಸಮೂರ್ತಿ, ಅಭಿಯಂತರರು, ವಿದ್ಯುತ್ ವಿಭಾಗ, ವಾರ್ಡ್ ಸಂಖ್ಯೆ 08.
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ
- ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು, ಅರೋಗ್ಯ
- ಶ್ರೀ. ಗೋವಿಂದರಾಜು, ಅಭಿಯಂತರರು, (BESCOM)
- ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (**BWSSB**)

<u>ವಾರ್ಡ್ ಸಮಿತಿ ಸದಸ್ಯರು</u>

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ. ಅಂತೋನಿ ದಾಸ್, ವಸತಿ ಕ್ಷೇಮಾಭಿವೃದ್ದಿ ಸಂಘದ ಸದಸ್ಯರು
- ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಸದಸ್ಯರು
- ಶ್ರೀಮತಿ ಭಾನುಶ್ರೀ ಎಮ್, ಸಹಕಾರನಗರ ಸದಸ್ಯರು
- ಶ್ರೀ ನಾಗರಾಜು, ದೇವಿನಗರ, ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿಯ ಸದಸ್ಯರುಗಳು ಎಲ್ಲಾ ವೃಂದದ

ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿ ರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ ವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳಿಗೆ ಹಾಗೂ ಅಧಿಕಾರಿಗಳಿಗೆ ವಿಚಾರಿಸಿದರು ಹಾಗೂ ದೇವಿನಗರದಲ್ಲಿ ನಡೆಯುತ್ತಿರುವ ಡಾಂಬರಿಕರನದ ವಿಷಯವನ್ನು ಸಂಬಂಧಪಟ್ಟ ಅಧಿಕಾರಿಗಳಲ್ಲಿ ವಿಚಾರಿಸಿದರು.

ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಸದಸ್ಯರು, ಮಾತನಾಡಿ ಸದರಿ ಸ್ಥಳದಲ್ಲಿ ಡಾಂಬರಿಕರನ ನಡೆದಿದ್ದು ಸಿಲ್ಟ್ ಅನ್ನು ಚರಂಡಿಯಿಂದ ತೆಗೆದು ರಸ್ತೆಯಲ್ಲೆ ಹಾಕಿರುವುದಾಗಿ ತಿಳಿಸಿದರು ಹಾಗೂ ಯುಜಿಡಿ ಬ್ಲಾಕ್ ಆದಾಗಿ ಒಂದು ವಾರವಾದರೂ ಸಮಸ್ಯೆಯನ್ನು ಬಿ.ಡಬ್ಲ್ಯೂಎಸ್.ಎಸ್.ಬಿ ರವರು ಬಗೆಹರಿಸಿರುವುದಿಲ್ಲ ಎಂದು ಸಭೆಗೆ ಮನವಿ ಮಾಡಿದರು.

ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (BWSSB) ಮಾತನಾಡಿ ಸಮಸ್ಯೆಯನ್ನು ಬಗೆಹರಿಸುತ್ತೇವೆಂದು ತಿಳಿಸಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಿಲ್ಟ್ ಮತ್ತು ಟ್ರಾಕ್ಟರ್ ಬಿಟ್ಟು ಸಮಸ್ಯೆಯನ್ನು ಬಗೆಹರಿಸಲು ಶ್ರೀ ಪ್ರವೀಣ್ ರವರಿಗೆ ಸೂಚಿಸಿದರು. ನಂತರ ಶ್ರೀ ಪ್ರವೀಣ್, ಕಿರಿಯ ಅಭಿಯಂತರರು ಮಾತನಾಡಿ ಸದರಿ ಸಿಲ್ಟ್ ಮಣ್ಣನ್ನು ತೆಗೆದು ಒಣಗಿದ ನಂತರ ಡಂಪಿಂಗ್ ಯಾರ್ಡ್‌ಗೆ ಸ್ಥಳಾಂತರಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮುತ್ತು ಬಾಲಾಜಿ ಬಡಾವಣೆ ನಿವಾಸಿಗಳು ಮಾತನಾಡಿ, ಒಂದು ತಿಂಗಳಿನಿಂದ ನೀರಿನ ಸಮಸ್ಯೆ ಕಾಡುತ್ತಿದ್ದು ಸರಿಯಾದ ಸಮಯಕ್ಕೆ ನೀರು ಪೂರೈಕೆ ಆಗುತ್ತಿಲ್ಲ, ಇದರಿಂದ ಬಹಳ ತೊಂದರೆ ಉಂಟಾಗಿದೆ ಎಂದು ತಿಳಿಸುತ್ತ ಬಿ.ಡಬ್ಲ್ಯೂಎಸ್.ಎಸ್.ಬಿ ರವರು ಸಮಸ್ಯೆ ಬಗೆಹರಿಸಿರುವುದಿಲ್ಲ ಅದನ್ನು ಸರಿಪಡಿಸಿ ಕೊಡಲು ಸಭೆಗೆ ಮನವಿ ಮಾಡಿದರು.

ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (BWSSB) ರವರು ಮಾತನಾಡಿ ಟಿ.ಕೆ ಹಳ್ಳಿ ಪೈಪ್‌ಲೈನ್ ದುರಸ್ಥಿಯಾಗಿರುವುದರಿಂದ ಕಳೆದ ಎರಡು ವಾರಗಳಿಂದ ಸದಿಯಾದ ಪ್ರಮಾಣದಲ್ಲಿ ನೀರು ಪೂರೈಕೆ ಆಗುತ್ತಿಲ್ಲವೆಂದು ಸಭೆಗೆ ತಿಳಿಸುತ್ತ ಏರೋ ಇಂಡಿಯಾ-2021 ಕಾರ್ಯಕ್ರಮ ನಡೆಯುತ್ತಿರುವುದರಿಂದ ನೀರಿನ ಒತ್ತಡದ ಸಮಸ್ಯೆಯಾಗುತ್ತಿದೆ. ಮುಂದಿನ ವಾರದಿಂದ ನೀರು ಸರಿಯಾದ ಪ್ರಮಾಣದಲ್ಲಿ ಪೂರೈಕೆ ಆಗುತ್ತದೆ ಎಂದು ಸಭೆಗೆ ತಿಳಿಸಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಮಸ್ಯೆಯನ್ನು ತ್ವರಿತವಾಗಿ ಬಗೆಹರೆಸಲು ಸೂಚಿಸುತ್ತ ಅತೀ ಜರೂರಾದ ಸಮಯದಲ್ಲಿ ನೀರಿನ ಟ್ಯಾಂಕರ್‌ಗಳ ಮೂಲಕ ಸರಬರಾಜು ಮಾಡಲು ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಿದರು.

ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಸದಸ್ಯರು, ನಿವಾಸಿ ಯುಜಿಡಿ ಬ್ಲಾಕ್ ಆದಾಗಿ ಒಂದು ವಾರವಾದರೂ ಸಮಸ್ಯೆಯನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಬಗೆಹರಿಸಿರುವುದಿಲ್ಲ ಎಂದು ಸಭೆಗೆ ಮನವಿ ಮಾಡಿದರು.

ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (BWSSB) ಮಾತನಾಡಿ ಸಮಸ್ಯೆಯನ್ನು ಬಗೆಹರಿಸುತ್ತೇವೆಂದು ತಿಳಿಸಿದರು.

ಬಾಲಾಜಿ ಬಡಾವಣೆ ನಿವಾಸಿಗಳು ಮಾತನಾಡಿ ಸದರಿ ಬಡಾವಣೆಯಲ್ಲಿರುವ ಮಾಂಸದ ಅಂಗಡಿಯವರು ಸ್ಥಳದಲ್ಲೆ ಕಸವನ್ನು ಹಾಕುತ್ತಿದಾರೆ ಇದರಿಂದ ಸಾರ್ವಜನಿಕರಿಗೆ ತುಂಬ ತೊಂದರೆ ಊಂಟಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡಿ, ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಸಮಸ್ಯೆಯನ್ನು ಬಗೆಹರಿಸಲಾಗುವುದೆಂದು ಸಭೆಗೆ ತಿಳಿಸಿದರು. ಈ ಕುರಿತು ನೋಡೆಲ್ ಅಧಿಕಾರಿಗಳು ಮಾತನಾಡಿ ನೋಟೀಸ್ ನೀಡುವಂತೆ ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಪ್ರವೀಣ್ ಎ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

06/2/24
(ಶ್ರೀ ಗುರು)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

ಖೈ:ಸ.ಕಾ.

**<u>ಪ್ರತಿಯನ್ನು:-</u>**

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
9. ಕಛೇರಿ ಕಡತಕ್ಕೆ.